# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **1423**
**ವಿಧಾನ ಪರಿಷತ್ ಸದಸ್ಯರ ಹೆಸರು** : **ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಉತ್ತರಿಸುವ ದಿನಾಂಕ** : **18-12-2025**
**ಉತ್ತರಿಸುವ ಸಚಿವರು** : **ಮಾನ್ಯ ಗೃಹ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಅಗ್ನಿಶಾಮಕ ಮತ್ತು ಕಾರಾಗೃಹ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎ.ಎಸ್.ಐ ಮತ್ತು ಪಿ.ಎಸ್.ಐ ಗಳಿಗೆ ವಾರ್ಷಿಕ 30 ದಿನಗಳ ಗೆಜೆಟೆಡ್ ಹಾಲಿಡೇ ನೀಡುತ್ತಿರುವುದು ನಿಜವೇ; | ಹೌದು.<br><br>**ಅಗ್ನಿಶಾಮಕ ಇಲಾಖೆ:**<br><br>ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಗ್ನಿಶಾಮಕ ಠಾಣಾಧಿಕಾರಿ ಮತ್ತು ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿಗಳಿಗೆ ವಾರ್ಷಿಕ 30 ದಿನಗಳ ಗೆಜೆಟೆಡ್ ಹಾಲಿಡೇ ಬದಲಾಗಿ 30 ದಿನಗಳ ವೇತನವನ್ನು ನೀಡಲಾಗುತ್ತಿದೆ.<br><br>**ಕಾರಾಗೃಹ ಇಲಾಖೆ:**<br><br>ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 92 ಪಿಆರ್‌ಇ 2006, ದಿನಾಂಕ: 12-09-2007 ರನ್ವಯ ಕಾರಾಗೃಹ ಇಲಾಖೆಯ ಪಹರೆ ಸಿಬ್ಬಂದಿಗಳಿಗೆ 30 ದಿನಗಳ ಗೆಜೆಟೆಡ್ ಹಾಲಿಡೇ ಬದಲಾಗಿ 30 ದಿನಗಳ ವೇತನವನ್ನು ನೀಡಲಾಗುತ್ತಿದೆ.<br><br>**ಪೊಲೀಸ್ ಇಲಾಖೆ:**<br><br>ಪ್ರಸ್ತುತ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಕೆಲವು ನಿರ್ದಿಷ್ಟ ವೃಂದದ ಸಿಬ್ಬಂದಿಗಳನ್ನೂ ಒಳಗೊಂಡಂತೆ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಹೆಡ್ ಕಾನ್ಸ್‌ಟೇಬಲ್ ವೃಂದದ ಸಿಬ್ಬಂದಿಗಳಿಗೆ ಅವರು ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯ ನಿರ್ವಹಿಸಿದ್ದಕ್ಕಾಗಿ 30 ದಿನಗಳ ಹೆಚ್ಚುವರಿ ವೇತನವನ್ನು ನೀಡಲಾಗುತ್ತಿದೆ.<br><br>ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಲಭ್ಯವಿರುವ ಪತ್ರಾಂಕಿತ ರಜಾ ವೇತನದ ಸೌಲಭ್ಯವೂ ಸೇರಿದಂತೆ ಸರ್ಕಾರಿ ನೌಕರರ ವಿಶೇಷ ಭತ್ಯೆಯ ಪರಿಷ್ಕರಣೆಯು ಸರ್ಕಾರ ನೀತಿ ನಿರ್ಣಯಕ್ಕೆ ಸಂಬಂಧಿಸಿದ್ದಾಗಿರುತ್ತದೆ. |
| (ಆ) | ನಿಜವಾದಲ್ಲಿ, ಸಾರ್ವಜನಿಕರಿಗೆ ಹೆಚ್ಚು ಹತ್ತಿರವಾಗಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಎ.ಎಸ್.ಐ ಮತ್ತು ಪಿ.ಎಸ್.ಐ ಗಳಿಗೂ ವಾರ್ಷಿಕ 30 ದಿನಗಳ ಗೆಜೆಟೆಡ್ ಹಾಲಿಡೇ ನೀಡಬೇಕೆನ್ನುವ ಬೇಡಿಕೆ ಕೇಳಿಬಂದಿದೆಯೇ; | |

| | | |
|---|---|---|
| (ಇ) | ಬಂದಿದ್ದಲ್ಲಿ, ಇವರ ಬೇಡಿಕೆಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; ನಿರ್ದಿಷ್ಟ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದೇ? | ಪೊಲೀಸ್ ಇಲಾಖೆಯ ಎ.ಎಸ್.ಐ ಮತ್ತು ಪಿ.ಎಸ್.ಐ ವೃಂದದವರು ಗೆಜೆಟೆಡ್(ಪತ್ರಾಂಕಿತ) ರಜಾ ದಿನಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ ಪ್ರಸ್ತುತ ನೀಡುತ್ತಿರುವ 15 ದಿನಗಳ ವೇತನವನ್ನು 30 ದಿನಗಳ ವೇತನಕ್ಕೆ ಹೆಚ್ಚಿಸಿ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಹೆಚ್‌ಡಿ 364 ಎಸ್‌ಎಫ್‌ಬಿ 2025**

**(ಡಾ. ಜಿ. ಪರಮೇಶ್ವರ)**
**ಗೃಹ ಸಚಿವರು**